ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 16 ಇಜಿಒವಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 13.09.2022

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು-560001.

ಇವರಿಗೆ,

ಎಲ್ಲಾ ವಿಶ್ವವಿದ್ಯಾಲಯಗಳ
ಕುಲಸಚಿವರು

**ವಿಷಯ:** ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ (NSP) ನವೀಕರಣಕ್ಕಾಗಿ ಬಾಕಿ ಉಳಿದಿರುವ ವಿದ್ಯಾರ್ಥಿವೇತನ ಅರ್ಜಿಯ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಕುರಿತು.

**ಉಲ್ಲೇಖ:** ಭಾರತ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಮಂತ್ರಾಲಯದ ಜಂಟಿ ಕಾರ್ಯದರ್ಶಿರವರು ಬರೆದಿರುವ ಅರೆ ಸರ್ಕಾರಿ ಪತ್ರ ಸಂಖ್ಯೆ : 1-42/2022-NS-1, ದಿನಾಂಕ: 24.08.2022.

ಮಾನ್ಯರೇ,

***********

ಮೇಲ್ಕಂಡ ವಿಷಯ ಮತ್ತು ಉಲ್ಲೇಖಿತ ಭಾರತ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಮಂತ್ರಾಲಯದ ಜಂಟಿ ಕಾರ್ಯದರ್ಶಿರವರು ಬರೆದಿರುವ ಅರೆ ಸರ್ಕಾರಿ ಪತ್ರದಲ್ಲಿ, ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು ಮತ್ತು ಅಧೀನ ಕಾಲೇಜುಗಳಲ್ಲಿ ಸುಮಾರು 9,234 ಅರ್ಜಿಗಳು ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್ (NSP)ನಲ್ಲಿ ನವೀಕರಣಕ್ಕಾಗಿ ಬಾಕಿ ಉಳಿದಿವೆ ಎಂದು ತಿಳಿಸಿರುತ್ತಾರೆ. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್ (NSP)ನಲ್ಲಿ ನವೀಕರಣಕ್ಕಾಗಿ ಬಾಕಿ ಇರುವ ಅರ್ಜಿಗಳ ಮೇಲೆ ಕೂಡಲೇ ಕ್ರಮ ತೆಗೆದುಕೊಂಡು ಇತ್ಯರ್ಥಪಡಿಸಿ ಒಂದು ವಾರದೊಳಗಾಗಿ ಸರ್ಕಾರಕ್ಕೆ ವರದಿ ಮಾಡುವಂತೆ ತಮ್ಮನ್ನು ಕೋರಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

13/09/2022
(ಎಂ.ಜಿ.ವೆಂಕಟೇಶಯ್ಯ)
ಸರ್ಕಾರದ ಉಪ ಕಾರ್ಯದರ್ಶಿ
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)
ಉನ್ನತ ಶಿಕ್ಷಣ ಇಲಾಖೆ.

ಪ್ರತಿ ಮಾಹಿತಿಗಾಗಿ,

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು - ಕಾಲೇಜು ಮತ್ತು ತಾಂತ್ರಿಕ ಶಿಕ್ಷಣದ ಅಡಿಯಲ್ಲಿರುವ ಕಾಲೇಜುಗಳಿಗೆ ನಿರ್ದೇಶನವನ್ನು ನೀಡುವುದಕ್ಕಾಗಿ.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು (ವಿಶ್ವವಿದ್ಯಾಲಯಗಳು), ಉನ್ನತ ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.